ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/112/ಬ್ಯಾಕ್‌ಲಾಗ್/ನೇ.ವಿ/2011-12

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:15.03.2019

ಸುತ್ತೋಲೆ

ವಿಷಯ:- ರಾಜ್ಯ ಸಿವಿಲ್ ಸೇವೆಗಳಲ್ಲಿನ ನೇರ ನೇಮಕಾತಿ ಮತ್ತು ಮುಂಬಡ್ತಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮೀಸಲಾತಿ ಪಾಲಿಸಿರುವ ಬಗ್ಗೆ ಪರಿಶೀಲನೆ ಮಾಡುವ ಕುರಿತು.

ಉಲ್ಲೇಖ:- ಆಯುಕ್ತರು ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಸಕನಿ/ಮೀ .ಜಾ.ಕೋ-2/ಸಿಆರ್-10/2018-19, ದಿ:01.03.2019.

** ** **

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರದ ವಿವಿಧ ಇಲಾಖೆ/ಅನುದಾನಿತ ಸಂಸ್ಥೆಗಳಲ್ಲಿ ಮೀಸಲಾತಿ ಬಗ್ಗೆ ಪರಿಶೀಲನೆ ನಡೆಸಲು ಸಮಾಜ ಕಲ್ಯಾಣ ಇಲಾಖೆಯಿಂದ ತನಿಖೆಯನ್ನು ಕೈಗೊಳ್ಳಲಾಗುತ್ತಿದ್ದು, ಸಮಾಜ ಕಲ್ಯಾಣ ಇಲಾಖೆಯ ತನಿಖಾ ತಂಡ ಮೀಸಲಾತಿ ಬಗ್ಗೆ ಪರಿಶೀಲನೆ ನಡೆಸಲು ಕಛೇರಿ/ಕಾಲೇಜಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಈ ಕೆಳಕಂಡ ಅಗತ್ಯ ಮಾಹಿತಿ/ದಾಖಲೆಗಳನ್ನು ಹಾಗೂ ತನಿಖಾ ತಂಡ ಕೋರುವ ಇತರೆ ದಾಖಲಾತಿಗಳನ್ನು ಒದಗಿಸಿ ಸಹಕರಿಸುವಂತೆ ಸೂಚಿಸಲಾಗಿದೆ.

1. ಸಂಸ್ಥೆಯ ವೃಂದ ಮತ್ತು ನೇಮಕಾತಿ ನಿಯಮಗಳು (ತಿದ್ದುಪಡಿಗಳು)
2. ನೇರ ನೇಮಕಾತಿಯಲ್ಲಿ ಹುದ್ದೆಗಳನ್ನು ಭರ್ತಿ ಮಾಡಿರುವ ಬಗ್ಗೆ ವೃಂದವಾರು ಮಾಹಿತಿ ಹಾಗೂ ನೇಮಕಾತಿ ಆದೇಶಗಳು(ದಿನಾಂಕ:01.01.1984 ರಿಂದ)
3. ವೇಕೆನ್ಸಿ ಮತ್ತು ರೋಸ್ಟರ್ ರಿಜಿಸ್ಟರ್(ವೃಂದವಾರು)
4. ಹುದ್ದೆಗಳು ಮಂಜೂರಾದ ಆದೇಶದ ಪ್ರತಿಗಳು(ವೃಂದವಾರು)
5. ದಿನಾಂಕ:27.04.1978 ರಿಂದ ಮುಂಬಡ್ತಿ ನೀಡಿರುವ ಆದೇಶದ ಪ್ರತಿಗಳು(ದಿನಾಂಕವಾರು ಮತ್ತು ವೃಂದವಾರು)
6. ಪ್ರತಿ ವೃಂದದ ಜೇಷ್ಠತಾ ಪಟ್ಟಿ.

ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಹಾಗೂ ಇತರೆ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದುವುಗಳ ಮೀಸಲಾತಿ) (ತಿದ್ದುಪಡಿ) ಅಧಿನಿಯಮ 2000 ರ ನಿಯಮ 12(2) ಪ್ರಕಾರ ಸಮಾಜ ಕಲ್ಯಾಣ ಇಲಾಖೆಯು ಕೋರಿರುವ ಮಾಹಿತಿಯನ್ನು ನೀಡುವುದು ಕಡ್ಡಾಯವಾಗಿರುತ್ತದೆ.

ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು

ಇವರಿಗೆ,

1. ಪ್ರಾದೇಶಿಕ ಜಂಟಿ ನಿರ್ದೇಶಕರುಗಳು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ, ಶಿವಮೊಗ್ಗ ಮತ್ತು ಕಲಬುರಗಿ.
2. ಎಲ್ಲಾ ಖಾಸಗಿ ಅನುದಾನಿತ ಕಾಲೇಜುಗಳ ಆಡಳಿತ ಮಂಡಳಿಯ ಅಧ್ಯಕ್ಷರು/ಕಾರ್ಯದರ್ಶಿಗಳು
3. ಎಲ್ಲಾ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳು
4. ಮಾಹಿತಿ ಅಧಿಕಾರಿಗಳು ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ ಬೆಂಗಳೂರು - ಸದರಿ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.

ಪ್ರತಿಯನ್ನು:-

1. ಆಯುಕ್ತರು ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
2. ಕಛೇರಿ ಪ್ರತಿ.

D:\App. sec\Srinivas\Bangalore region\112_Back log_Ne.Vi_2011-12_D.O. Letter_Dharwad.doc